## ಕರ್ನಾಟಕವಿಧಾನಪರಿಷತ್ತು

ಚುಕ್ಕೆಗುರುತಿನ ಪ್ರಶ್ನೆಸಂಖ್ಯೆ : **30 (130)**

ಸದಸ್ಯರ ಹೆಸರು : ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)

ಉತ್ತರಿಸ ಬೇಕಾದ ದಿನಾಂಕ : **14.02.2024**

ಉತ್ತರಿಸುವ ಸಚಿವರು : ಮಾನ್ಯ ಕಂದಾಯ ಸಚಿವರು

| ಪ್ರಶ್ನೆ | ಉತ್ತರ |
| --- | --- |
| (ಅ) ಬರದ ಕಾರಣ ರಾಜ್ಯದ ಜನರು ಕುಡಿಯುವ ನೀರಿನ ಸಮಸ್ಯೆ ಮತ್ತು ಉದ್ಯೋಗವಿಲ್ಲದೆ ಗುಳೆ ಹೊರಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; ಬಂದಿದ್ದಲ್ಲಿ, ಕುಡಿಯುವ ನೀರಿನ ಸಮಸ್ಯೆ ಮತ್ತು ಈ ಗುಳೆ ಹೋಗುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ಮಾಹಿತಿ ನೀಡುವುದು) | ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯ ಬರ ನಿರ್ವಹಣೆ ಕೈಪಿಡಿ-2020ರನ್ವಯ ಒಟ್ಟು 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧಾರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ.<br><br>ಕೇಂದ್ರ ಸರ್ಕಾರದಿಂದ NDRF ಅನುದಾನವನ್ನು ನಿರೀಕ್ಷಿಸಿ ರಾಜ್ಯ ವಿಪತ್ತು ಪರಿಹಾರ ನಿಧಿ (SDRF) ಮಾರ್ಗಸೂಚಿಗಳ ಪ್ರಕಾರ ಬೆಳೆ ಹಾನಿ ಪರಿಹಾರದ ಮೊದಲನೇ ಕಂತಾಗಿ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ಗರಿಷ್ಠ ರೂ.2,000/- ರವರೆಗೆ ಪ್ರತಿ ರೈತರಿಗೆ ಪಾವತಿಸಲು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ ಆಯುಕ್ತರಿಗೆ ರೂ.685 ಕೋಟಿ ಬಿಡುಗಡೆಗೊಳಿಸಿದ್ದು, ಈ ಪೈಕಿ ದಿನಾಂಕ:12-02-2024ರವರೆಗೆ 33.09 ಲಕ್ಷ ಅರ್ಹ ರೈತರ ಆಧಾರ್ ಜೋಡಣೆಯಾಗಿರುವ ಬ್ಯಾಂಕ್ ಖಾತೆಗಳಿಗೆ ರೂ.628.03 ಕೋಟಿಗಳನ್ನು ನೇರವಾಗಿ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ.<br><br>ಗುಳೆ ಹೋಗುವುದನ್ನು ತಪ್ಪಿಸಲು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ 2023-24 ನೇ ಸಾಲಿನಲ್ಲಿ ರಾಜ್ಯ ಸರ್ಕಾರವು 223 ತಾಲ್ಲೂಕುಗಳನ್ನು ಬರ-ಪೀಡಿತ ಎಂದು ಘೋಷಿಸಿರುವ ಹಿನ್ನಲೆಯಲ್ಲಿ ಒಂದು ಕುಟುಂಬಕ್ಕೆ 100 ರಿಂದ 150 ಮಾನವ ದಿನಗಳಿಗೆ ಹೆಚ್ಚಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದೆ.<br><br>ಪ್ರಸ್ತುತ ಸಾಲಿನ 28.66 ಲಕ್ಷ ಕುಟುಂಬಗಳಿಗೆ ಸೇರಿದ 51.68 ಲಕ್ಷ ಜನರಿಗೆ ಉದ್ಯೋಗ ಒದಗಿಸಲಾಗಿದೆ. ಜನವರಿ 2024ರ ಅಂತ್ಯಕ್ಕೆ 12.42 ಕೋಟಿ ಮಾನವದಿನಗಳ ಉದ್ಯೋಗ ಸೃಜನೆಯಾಗಿದ್ದು, ರೂ.3361.74 ಕೋಟಿ ಕೂಲಿ ಮೊತ್ತ ಜನರ ಖಾತೆಗಳಿಗೆ ನೇರವಾಗಿ ಜಮೆಯಾಗಿರುತ್ತದೆ. 35382 ಕುಟುಂಬಗಳು 100 ದಿನಗಳ ಉದ್ಯೋಗ ಪೂರೈಸಿದ್ದು, 5.92 ಲಕ್ಷ ಕುಟುಂಬಗಳು 70 ರಿಂದ 99 ಮಾನವ ದಿನಗಳ ಉದ್ಯೋಗ ದಿನಗಳನ್ನು ಪೂರೈಸಿದೆ. |

ಪ್ರಸ್ತುತ ಸಾಲಿನ ಬರದ ಹಿನ್ನಲೆಯಲ್ಲಿ 17.59 ಲಕ್ಷ ಕಾಮಗಾರಿಗಳನ್ನು ಕೈಗೆತ್ತಿಕೊಂಡಿದ್ದು, 7.62 ಲಕ್ಷ ಕಾಮಗಾರಿಗಳನು ಕೃಷಿ ಮತ್ತು ಇತರ ಚಟುವಟುಕೆಗಳಿಗೆ ಸಂಬಂಧಿಸಿದ ಕಾಮಗಾರಿಗಳಾಗಿವೆ.

ನರೇಗಾ IEC ಕಾರ್ಯಕ್ರಮದಡಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು IEC ತಂಡದವರು ಮನೆ ಮನೆಗೆ ಭೇಟಿ ನೀಡಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ದೊರೆಯುವ ವೈಯಕ್ತಿಕ ಸೌಲಭ್ಯಗಳು ಮತ್ತು ಸಮುದಾಯ ಕಾಮಗಾರಿಗಳಲ್ಲಿ ಕೆಲಸ ನಿರ್ವಹಿಸುವ ಬಗ್ಗೆ ಅರಿವು ಮೂಡಿಸಲಾಗುತ್ತಿದೆ

ಮುಂದಿನ 2024-25ನೇ ಸಾಲಿನ ನರೇಗಾ ವಾರ್ಷಿಕ ಕ್ರಿಯಾ ಯೋಜನೆ ತಯಾರಿಸುವಾಗ ವೈಯಕ್ತಿಕ ಸೌಲಭ್ಯಕ್ಕಾಗಿ ಗ್ರಾಮ ಪಂಚಾಯಿತಿ ಎಲ್ಲಾ ಅರ್ಹ ಕುಟುಂಬಗಳನ್ನು ಆಯ್ಕೆ ಮಾಡಿಕೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

ಮುಂದಿನ ದಿನಗಳಲ್ಲಿ ಕುಡಿಯುವ ನೀರು ಪೂರೈಕೆ, ಗೋಶಾಲೆ & ಮೇವಿನ ಬ್ಯಾಂಕ್ ನಿರ್ವಹಣೆ ಇತರೆ ತುರ್ತು ಬರ ನಿರ್ವಹಣೆ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು 31 ಜಿಲ್ಲೆಗಳಿಗೆ ರೂ.324 ಕೋಟಿ ಗಳನ್ನು ದಿನಾಂಕ:31-10-2023ರಂದು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ. ಈ ಮೊತ್ತವನ್ನು ಒಳಗೊಂಡಂತೆ ದಿನಾಂಕ:29-01-2024 ರನ್ವಯ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ಒಟ್ಟು ರೂ.735.87ಕೋಟಿ ಹಾಗೂ ತಹಶೀಲಾರ್ ಪಿಡಿ ಖಾತೆಯಲ್ಲಿ ರೂ.131.95 ಕೋಟಿ ಒಟ್ಟು ರೂ.867.82 ಕೋಟಿ ಅನುದಾನ ಲಭ್ಯವಿದ್ದು ತುರ್ತು ಬರ ನಿರ್ವಹಣೆಗೆ ಅನುದಾನದ ಕೊರತೆ ಇರುವುದಿಲ್ಲ.

ತಾಲ್ಲೂಕು ಮಟ್ಟದಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವು ನಿರ್ವಹಣೆಗೆ ಹಾಗೂ ಬರ ಪರಿಹಾರ ಕ್ರಮಗಳ ಮೇಲ್ವಿಚಾರಣೆಗಾಗಿ ಶಾಸಕರ ನೇತೃತ್ವದಲ್ಲಿ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ರಚಿಸಲಾಗಿದೆ. ಸದರಿ ಕಾರ್ಯ ಪಡೆಯು ಕಾಲ-ಕಾಲಕ್ಕೆ ಸಭೆಗಳನ್ನು ನಡೆಸಿ ಬರ ನಿರ್ವಹಣೆಯ ಪರಿಸ್ಥಿತಿಯನ್ನು ಪರಿಶೀಲಿಸಲು ಸೂಚನೆ ನೀಡಲಾಗಿದೆ. ದಿನಾಂಕ:10-02-2024ರಂತೆ 431 ಸಭೆಗಳನ್ನು ನಡೆಸಲಾಗಿದೆ.

ದಿನಾಂಕ:10-2-2024ರನ್ವಯ 46 ಗ್ರಾಮಗಳಿಗೆ 60 ಟ್ಯಾಂಕರ್ ಮೂಲಕ ಹಾಗೂ 156 ಗ್ರಾಮಗಳಲ್ಲಿ 183 ಖಾಸಗಿ ಬೋರ್ ವೆಲ್ ಗಳನ್ನು ಬಾಡಿಗೆ ಆಧಾರದ ಮೇರೆಗೆ ಪಡೆದು ಹಾಗೂ 4 ನಗರ ಸ್ಥಳೀಯ ಸಂಸ್ಥೆಗಳಲ್ಲಿನ 46 ವಾರ್ಡ್‌ಗಳಲ್ಲಿ 12 ಟ್ಯಾಂಕರ್‌ಗಳ ಮೂಲಕ ತುರ್ತು ಕುಡಿಯುವ ನೀರು ಪೂರೈಸಲಾಗುತ್ತಿದೆ.

ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ ಒಟ್ಟು 7082 ಗ್ರಾಮಗಳನ್ನು ಹಾಗೂ 1193 ವಾರ್ಡ್‌ಗಳನ್ನು ಗುರುತಿಸಲಾಗಿದೆ.

<table>
<tr>
<td></td>
<td>ಮುಂಜಾಗ್ರತಾ ಕ್ರಮವಾಗಿ ಒಟ್ಟು 6416 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿದ್ದು, ಅವುಗಳಲ್ಲಿ 2654 ಬೋರ್‌ವೆಲ್‌ಗಳ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ. ಖಾಸಗಿ ಟ್ಯಾಂಕರ್‌ಗಳನ್ನು ಬಾಡಿಗೆ ಪಡೆಯಲು 26ಜಿಲ್ಲೆಗಳಲ್ಲಿ ಟೆಂಡರ್ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ.</td>
</tr>
<tr>
<td>(ಆ) ಬಳ್ಳಾರಿ ಜಿಲ್ಲೆಯಲ್ಲಿ ಬರದ ಹಿನ್ನೆಲೆಯಲ್ಲಿ ಸಣ್ಣ ಮತ್ತು ಅತಿಸಣ್ಣ ರೈತರುಗಳು ತಮ್ಮ ಜಾನುವಾರುಗಳನ್ನು ಮಾರಿ ನಗರಗಳಿಗೆ ವಲಸೆ ಹೋಗುತ್ತಿವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು; (ಮಾಹಿತಿ ನೀಡುವುದು)</td>
<td>ಬರ ಪರಿಸ್ಥಿತಿಯ ನಿರ್ವಹಣೆಗಾಗಿ ಸರ್ಕಾರದಿಂದ ಕೈಗೊಂಡಿರುವ ಕ್ರಮಗಳನ್ನು ಅನುಬಂಧ-1ರಲ್ಲಿ ಒದಗಿಸಿದೆ.</td>
</tr>
<tr>
<td>(ಇ) ಬಳ್ಳಾರಿ-ವಿಜಯನಗರ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಬರ ನಿರ್ವಹಣೆಗಾಗಿ ಕಾಮಗಾರಿಗಳನ್ನು ಈ ಆರ್ಥಿಕ ವರ್ಷದಲ್ಲಿ ಕೈಗೊಳ್ಳಲಾಗಿದೆಯೇ? ಹಾಗಿದ್ದಲ್ಲಿ ಸಂಪೂರ್ಣ ವಿವರಗಳೊಂದಿಗೆ ಮಾಹಿತಿ ನೀಡುವುದು;</td>
<td>ಬಳ್ಳಾರಿಯ ಜಿಲ್ಲೆಯ 05 ತಾಲ್ಲೂಕುಗಳು ಮತ್ತು ವಿಜಯನಗರ ಜಿಲ್ಲೆಯ 06 ತಾಲ್ಲೂಕುಗಳು ಸೇರಿದಂತೆ ಒಟ್ಟು 11 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ. ಬರಗಾಲದ ತೀವ್ರತೆಯ ಹಿನ್ನಲೆಯಲ್ಲಿ ಅಗತ್ಯತೆಯನುಸಾರ ಮೇವು, ಕುಡಿಯುವ ನೀರು ಪೂರೈಕೆ ಹಾಗೂ ಇತರೆ ತುರ್ತು ಕಾರ್ಯಗಳ ನಿರ್ವಹಣೆಗಾಗಿ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ದಿನಾಂಕ:31-10-2023ರ ಸರ್ಕಾರಿ ಆದೇಶದಲ್ಲಿಒಟ್ಟು ರೂ.1650.00 ಲಕ್ಷಗಳ ಅನುದಾನ ಬಿಡುಗಡೆಗೊಳಿಸಲಾಗಿದೆ.
<table>
<tr><th>ಕ್ರಸಂ</th><th>ಜಿಲ್ಲೆಯಹೆಸರು</th><th>ಬಿಡುಗಡೆಮಾಡಿರುವಮೊತ ್ತ (ರೂ. ಲಕ್ಷಗಳಲ್ಲಿ</th></tr>
<tr><td>1</td><td>ವಿಜಯನಗರ</td><td>900.00</td></tr>
<tr><td>2</td><td>ಬಳ್ಳಾರಿ</td><td>750.00</td></tr>
<tr><td colspan="2">ಒಟ್ಟು</td><td>1650.00</td></tr>
</table>
ಬಳ್ಳಾರಿ ಜಿಲ್ಲೆ: ಬಳ್ಳಾರಿ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ರೂ.29.93 ಕೋಟಿ ಹಾಗೂ ತಹಶೀಲಾರ್‌ಗಳ ಪಿಡಿ ಖಾತೆಯಲ್ಲಿ ತುರ್ತು ಬರ ನಿರ್ವಹಣೆ ಕ್ರಮಗಳಿಗೆ ರೂ.2.11 ಕೋಟಿ ಸೇರಿ ಒಟ್ಟು ರೂ. 32.04 ಕೋಟಿ ಪಿಡಿ ಖಾತೆಯಲ್ಲಿ ಲಭ್ಯವಿರುತ್ತದೆ.
ಬಳ್ಳಾರಿ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಎದುರಿಸುತ್ತಿರುವ ಸಂಡೂರು ತಾಲ್ಲೂಕಿನ 8 ಗ್ರಾಮಗಳಲ್ಲಿ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಪಡೆದು ಸರಬರಾಜು ಮಾಡಲಾಗುತ್ತಿದೆ ಹಾಗೂ ಬಳ್ಳಾರಿ ತಾಲ್ಲೂಕಿನ ಹರಗಿನಡೋಣಿ ಗ್ರಾಮದಲ್ಲಿ ಸರ್ಕಾರಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.
ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ 114 ಗ್ರಾಮಗಳನ್ನು ಹಾಗು 97 </td>
</tr>
</table>

ವಾರ್ಡ್‌ಗಳನು ಗುರುತಿಸಲಾಗಿದೆ ಮತ್ತು 122 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿದ್ದು, ಅವುಗಳಲ್ಲಿ 11 ಬೋರ್‌ವೆಲ್ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.

ಬಳ್ಳಾರಿ ಜಿಲ್ಲೆಯಲ್ಲಿ 302047 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು, ಮುಂದಿನ 30 ವಾರಗಳಿಗೆ ಸಾಕಾಗುತ್ತದೆ. 5168 ಮೇವಿನ ಮಿನಿಕಿಟ್‌ಗಳನ್ನು 1764 ರೈತರಿಗೆ ಉಚಿತವಾಗಿ ಪಶುಸಂಗೋಪನೆ ಇಲಾಖೆಯ ಮೂಲಕ ಹಸಿರು ಮೇವು ಬೆಳೆಯಲು ವಿತರಿಸಲಾಗಿದೆ.

ಬಳ್ಳಾರಿ ಜಿಲ್ಲೆಯಲ್ಲಿ ಪ್ರತಿ 15 ದಿನಕ್ಕೊಮ್ಮೆ ತಾಲ್ಲೂಕು ಟಾಸ್ಕ್‌ಫೋರ್ಸ್ ಸಭೆಗಳಲ್ಲಿ ಪರಿಶೀಲಿಸಿ ಮತ್ತು ಚರ್ಚಿಸಿ ಕುಡಿಯುವ ನೀರಿನ ಪರಿಸ್ಥಿತಿಯ ಕುರಿತು ಸತತವಾಗಿ ನಿಗಾವಹಿಸಲಾಗುತ್ತಿದೆ. ಇದುವರೆಗೂ 17 ಟಾಸ್ಕ್‌ಫೋರ್ಸ್ ಸಭೆಗಳು ನಡೆದಿರುತ್ತವೆ.

ಬಳ್ಳಾರಿ ಜಿಲ್ಲೆಯಲ್ಲಿ SDRF ಮಾರ್ಗಸೂಚಿ ಪ್ರಕಾರ ಮೊದಲನೇ ಕಂತಾಗಿ ಅರ್ಹ ರೈತರಿಗೆ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಗನುಗುಣವಾಗಿ ಗರಿಷ್ಠ ರೂ.2,000/-ಗಳವರೆಗೆ ದಿನಾಂಕ:12-02-2024ರ ವರೆಗೆ 35,099 ರೈತರಿಗೆ ರೂ 6.90 ಕೋಟಿಗಳನ್ನು ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಾಗಿದೆ.

**ವಿಜಯನಗರ ಜಿಲ್ಲೆ:** ವಿಜಯನಗರ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ರೂ.21.42 ಕೋಟಿ ಹಾಗೂ ತಹಶೀಲ್ದಾರ್‌ಗಳ ಪಿಡಿ ಖಾತೆಯಲ್ಲಿ ರೂ.2.88 ಕೋಟಿ ಸೇರಿ ಒಟ್ಟು ರೂ. 24.30 ಕೋಟಿ ಪಿಡಿ ಖಾತೆಯಲ್ಲಿ ಲಭ್ಯವಿರುತ್ತದೆ.

ವಿಜಯನಗರ ಜಿಲ್ಲೆಯಲ್ಲಿ 22 ಗ್ರಾಮಗಳಲ್ಲಿ 23 ಖಾಸಗಿ ಬೋರ್‌ವೆಲ್‌ಗಳ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ.

ಮುಂದಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ 473 ಗ್ರಾಮಗಳನ್ನು ಮತ್ತು 46 ವಾರ್ಡ್‌ಗಳನು ಗುರುತಿಸಲಾಗಿದೆ ಹಾಗೂ 578 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿದ್ದು, ಅವುಗಳಲ್ಲಿ 481 ಬೋರ್‌ವೆಲ್ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.

ವಿಜಯನಗರ ಜಿಲ್ಲೆಯಲ್ಲಿ 373780 ಮೆಟ್ರಿಕ್ ಟನ್ ಮೇವು ಲಭ್ಯವಿದ್ದು, ಮುಂದಿನ 22 ವಾರಗಳಿಗೆ ಸಾಕಾಗುತ್ತದೆ. 11876 ಮೇವಿನ ಮಿನಿಕಿಟ್‌ಗಳನ್ನು 4778 ರೈತರಿಗೆ ಉಚಿತವಾಗಿ ಪಶುಸಂಗೋಪನಾ ಇಲಾಖೆಯ ಮೂಲಕ ಹಸಿರು ಮೇವು ಬೆಳೆಯಲು ವಿತರಿಸಲಾಗಿದೆ.

ವಿಜಯನಗರ ಜಿಲ್ಲೆಯಲ್ಲಿ ಪ್ರತಿ 15 ದಿನಕ್ಕೊಮ್ಮೆ ತಾಲ್ಲೂಕು ಟಾಸ್ಕ್‌ಫೋರ್ಸ್ ಸಭೆಗಳಲ್ಲಿ ಚರ್ಚಿಸಿ ಪರಿಸ್ಥಿತಿಗನುಗುಣವಾಗಿ ಕುಡಿಯುವ ನೀರಿನ

| | |
|---|---|
| | ಪರಿಸ್ಥಿತಿಯ ಕುರಿತು ಸತತವಾಗಿ ನಿಗಾವಹಿಸಲಾಗುತ್ತಿದೆ. ಇದುವರೆಗೂ 13 ಟಾಸ್ಕ್‌ಫೋರ್ಸ್ ಸಭೆಗಳು ನಡೆದಿರುತ್ತವೆ.<br><br>ವಿಜಯನಗರ ಜಿಲ್ಲೆಯಲ್ಲಿ SDRF ಮಾರ್ಗಸೂಚಿ ಪ್ರಕಾರ ಮೊದಲನೇ ಕಂತಾಗಿ ಅರ್ಹ ರೈತರಿಗೆ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಗನುಗುಣವಾಗಿ ಗರಿಷ್ಠ ರೂ.2,000/-ಗಳವರೆಗೆ ದಿನಾಂಕ:12-02-2024ರ ವರೆಗೆ 1,17,267 ರೈತರಿಗೆ ರೂ.23.12 ಕೋಟಿಗಳನ್ನು ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗಳಿಗೆ ನೇರವಾಗಿ ವರ್ಗಾಯಿಸಲಾಗಿದೆ. |
| (ಈ) ಸದರಿ ಜಿಲ್ಲೆಯಲ್ಲಿ ಬರ ನಿರ್ವಹಣೆ ಕಾಮಗಾರಿ ಕೈಗೊಳ್ಳದಿದ್ದಲ್ಲಿ, ಅದಕ್ಕೆ ಕಾರಣಗಳೇನು? ಯಾವ ಕಾಲಮಿತಿಯಲ್ಲಿ ಬರ ನಿರ್ವಹಣೆ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು? (ಮಾಹಿತಿ ನೀಡುವುದು) | ಬರ ನಿರ್ವಹಣೆಗಾಗಿ ಎಲ್ಲಾ ಅಗತ್ಯ ಕ್ರಮಗಳನ್ನು ಸರ್ಕಾರದಿಂದ ಕೈಗೊಳ್ಳಲಾಗುತ್ತಿದೆ. |

ಕಡತ ಸಂಖ್ಯೆ: ಕಂಇ 56 ಟಿಎನ್‌ಆರ್ 2024

(ಕೃಷ್ಣಭೈರೇಗೌಡ)
ಕಂದಾಯ ಸಚಿವರು

## ಅನುಬಂಧ -1

## 2023ರ ಮುಂಗಾರು ಬರ ನಿರ್ವಹಣೆಗಾಗಿ ಸರ್ಕಾರದಿಂದ ಕೈಗೊಂಡ ಕ್ರಮಗಳು

1) 2023 ರ ಮುಂಗಾರಿನಲ್ಲಿ (ಜೂನ್ ರಿಂದ ಸೆಪ್ಟೆಂಬರ್ ವರೆಗೆ) ಶೇ. 25 ರಷ್ಟು ಮಳೆಕೊರತೆ ಕಂಡು ಬಂದಿದೆ. ಕೇಂದ್ರ ಸರ್ಕಾರದ ಬರ ಕೈಪಿಡಿ-2020 ರಲ್ಲಿ ಬರ ಪರಿಸ್ಥಿತಿ ಘೋಷಿಸಲು ಅನುಸರಿಸಬೇಕಾದ ಮಾನದಂಡಗಳನ್ನು ಹಂತ-1 ರಲ್ಲಿ ಕಡ್ಡಾಯ ಮಾನದಂಡಗಳಾದ ಮಳೆ ಕೊರತೆ (ಶೇ.60ಕ್ಕಿಂತ ಹೆಚ್ಚು) ಅಥವಾ ಸತತ ಮೂರು ವಾರಗಳ ಅಥವಾ ಅದಕ್ಕಿಂತ ಹೆಚ್ಚು ಶುಷ್ಕ ವಾತಾವರಣ (Dry Spell) ಕಂಡು ಬಂದಿರಬೇಕು. ಹಂತ-2 ರಲ್ಲಿ ತತ್ಪರಿಣಾಮ ಮಾನದಂಡಗಳಾದ ಕೃಷಿ ಬಿತ್ತನೆ ಪ್ರದೇಶ, ಉಪಗ್ರಹ ಆಧಾರಿತ ಬೆಳೆ ಆರೋಗ್ಯ ಸೂಚ್ಯಂಕ (NDVI/ NDWI-Dev (%) and VIC (%)) ತೇವಾಂಶ ಕೊರತೆ (MAI) ಹಾಗೂ ನದಿಗಳಲ್ಲಿನ ಹರಿವು, ಜಲಾಶಯಗಳ ನೀರಿನ ಸಂಗ್ರಹಣೆ ಹಾಗೂ ಅಂತರ್ಜಲ ಮಟ್ಟ ಸೂಚ್ಯಂಕಗಳಲ್ಲಿನ ತೀವ್ರತೆಯನ್ನು ಪರಿಶೀಲಿಸಿ ಬರಕ್ಕೆ ತುತ್ತಾಗಿರುವ ತಾಲ್ಲೂಕುಗಳನ್ನು ಗುರುತಿಸಿ, ಬೆಳೆ ಸಮೀಕ್ಷೆ ದೃಢೀಕರಣ (Ground Truthing) ವರದಿ ಜಿಲ್ಲಾಧಿಕಾರಿಗಳಿಂದ ಪಡೆದು, ಬರ ವರ್ಗೀಕರಣ (ಸಾಧಾರಣ & ತೀವ್ರ) ಮಾಡಲಾಗಿದೆ.

2) ಮಾನ್ಯ ಮುಖ್ಯಮಂತ್ರಿಗಳು ಮತ್ತು ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ (KSDMA) ಅಧ್ಯಕ್ಷರು ಜೂನ್ 1 ರಿಂದ ಇಲ್ಲಿಯವರೆಗೆ ಮೂರು ಬಾರಿ ರಾಜ್ಯದಲ್ಲಿನ ಬರ ಪರಿಸ್ಥಿತಿ ಹಾಗೂ ಕೈಗೊಂಡ ಕ್ರಮಗಳ ಕುರಿತು ಸಭೆ ನಡೆಸಿ ಪರಿಶೀಲಿಸಿದ್ದಾರೆ.

3) ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ರಾಜ್ಯದಲ್ಲಿ ಬರ, ಪ್ರವಾಹ ಮತ್ತು ಇತರೆ ನೈಸರ್ಗಿಕ ವಿಕೋಪಗಳಿಂದುದ್ಭವಿಸಬಹುದಾದ ಪರಿಸ್ಥಿತಿಯನ್ನು ಪರಾಮರ್ಶಿಸಲು ಮತ್ತು ಇದನ್ನು ಸಮರ್ಥವಾಗಿ ನಿಭಾಯಿಸಲು ಹಾಗೂ ಅಗತ್ಯ ನಿರ್ದೇಶನಗಳನ್ನು ನೀಡಲು ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದೆ. ಜೂನ್ 1 ರಿಂದ ಜನವರಿ ಅಂತ್ಯಕ್ಕೆ 10 ಬಾರಿ ಸಭೆ ನಡೆಸಿ ರಾಜ್ಯದಲ್ಲಿನ ಬರ ಪರಿಸ್ಥಿತಿ ಪರಿಶೀಲಿಸಿ ನಿರ್ವಹಣೆಗೆ ಅಗತ್ಯ ಸಲಹೆ ಹಾಗೂ ಕ್ರಮಗಳ ಕುರಿತು ತೀರ್ಮಾನಿಸಿದೆ.

4) ಮಾನ್ಯ ಕಂದಾಯ ಸಚಿವರು 4 ಕಂದಾಯ ವಿಭಾಗಗಳಲ್ಲಿ ಬರ ಪರಿಸ್ಥಿತಿಯ ಪರಿಶೀಲನಾ ಸಭೆಗಳನ್ನು ನಡೆಸಿ ಅಗತ್ಯ ಕ್ರಮಗಳು ತೆಗೆದುಕೊಂಡಿರುವ ಬಗ್ಗೆ ಪರಿಶೀಲಿಸಿ ಸೂಚನೆಗಳನ್ನು ನೀಡಿರುತ್ತಾರೆ ಹಾಗೂ ರಾಜ್ಯದ 26 ಜಿಲ್ಲೆಗಳಿಗೆ ಭೇಟಿ ನೀಡಿ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಬರ ಪರಿಸ್ಥಿತಿಯ ಪರಿಶೀಲನಾ ಸಭೆಗಳನ್ನು ನಡೆಸಿರುತ್ತಾರೆ. ಇದಲ್ಲದೇ, 4 ಬಾರಿ ಎಲ್ಲಾ ಜಿಲ್ಲಾಧಿಕಾರಿಗಳೊಡನೆ ಸಭೆ ನಡೆಸಿರುತ್ತಾರೆ.

5) ರಾಜ್ಯ ಮಟ್ಟದ ಹವಾಮಾನ ಕಣ್ಗಾವಲು ಸಮಿತಿಯು ವಾರಕ್ಕೊಮ್ಮೆ ಹವಾಮಾನ, ಜಲಾಶಯಗಳ ನೀರನ ಸಂಗ್ರಹಣಾ, ಸಣ್ಣ ನೀರಾವರಿ ಕೆರೆಗಳಲ್ಲಿನ ನೀರಿನ ಸಂಗ್ರಹಣಾ, ಅಂತರ್ಜಲ ಮಟ್ಟ ಕುರಿತು ಪರಿಶೀಲಿಸುತ್ತದೆ ಹಾಗೂ ವಿವಿಧ ಬರ ನಿರ್ವಹಣೆ ಕಾರ್ಯಚಟುವಟಿಕೆಗಳ ಪ್ರಗತಿ ಕುರಿತು ಮಾಹಿತಿ ಪಡೆದು ಬರ ನಿರ್ವಹಣೆಗೆ ಬೇಕಾದ ಸಲಹಾ ಸೂಚನೆಗಳನ್ನು ನೀಡಲಾಗುತ್ತಿದೆ.

6) ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯದ ಬರ ನಿರ್ವಹಣೆ ಕೈಪಿಡಿ 2020 ರನ್ವಯ ಜೂನ್ 1 ರಿಂದ ಆಗಸ್ಟ್ 19 ರ ವರೆಗಿನ ಅವಧಿಗೆ ಎಲ್ಲಾ ಮಾನದಂಡಗಳನ್ನು ವಿಶ್ಲೇಷಿಸಿ 195 ತಾಲ್ಲೂಕುಗಳನ್ನು ಬರ ಪರಿಸ್ಥಿತಿ ಕಂಡುಬಂದಿರುವ ತಾಲ್ಲೂಕುಗಳೆಂದು ಗುರುತಿಸಿ ಈ ತಾಲ್ಲೂಕುಗಳಲ್ಲಿ ಬೆಳೆ ಸಮೀಕ್ಷೆ ದೃಢೀಕರಣ (GT) ಕೈಗೊಂಡು 195 ತಾಲ್ಲೂಕುಗಳನ್ನು ದಿನಾಂಕ:13-9-2023ರಂದು ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಿ, ದಿನಾಂಕ:22-9-

2023ರಂದು ರೂ.4860.13 ಕೋಟಿಗಳನ್ನು NDRF ರಡಿ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಾಯಿತು.

7) ಜೂನ್ ರಿಂದ ಸೆಪ್ಟೆಂಬರ್ ಅಂತ್ಯದ ಅವಧಿಗೆ ಎಲ್ಲಾ ಮಾನದಂಡಗಳನ್ನು ವಿಶ್ಲೇಷಿಸಿ 21 ತಾಲ್ಲೂಕುಗಳನ್ನು ಬರ ಪರಿಸ್ಥಿತಿ ಕಂಡುಬಂದಿರುವ ತಾಲ್ಲೂಕುಗಳೆಂದು ಗುರುತಿಸಿ ಈ ತಾಲ್ಲೂಕುಗಳಲ್ಲಿ ಬೆಳೆ ಸಮೀಕ್ಷೆ ದೃಢೀಕರಣ (GT) ಕೈಗೊಂಡು 21 ತಾಲ್ಲೂಕುಗಳನ್ನು ದಿನಾಂಕ:12-10-2023ರಂದು ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಿ, ಮೊದಲನೇ ಮೆಮೊರಾಂಡಮ್‌ರಲ್ಲಿ ಕೋರಲಾದ ರೂ.4860.13 ಕೋಟಿಗಳ ಮೊತ್ತದ ಜೊತೆಗೆ ರೂ.463.74 ಕೋಟಿ ಹಾಗೂ Gratuitous Relief ರೂ.12,577.86 ಕೋಟಿ ಸೇರಿ ಒಟ್ಟು ರೂ.17,901.73 ಕೋಟಿಗಳ ಆರ್ಥಿಕ ನೆರವು ಕೋರಿ ದಿನಾಂಕ:20-10-2023ರಂದು NDRF ರಡಿ ಆರ್ಥಿಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಾಯಿತು.

8) ಜೂನ್ ರಿಂದ ಅಕ್ಟೋಬರ್ ಅಂತ್ಯದ ವರೆಗಿನ ಹವಾಮಾನ ಪರಿಸ್ಥಿತಿ ಅನುಗುಣವಾಗಿ 7 ತಾಲ್ಲೂಕುಗಳನ್ನು ಬರ ಪರಿಸ್ಥಿತಿ ಕಂಡುಬಂದಿರುವ ತಾಲ್ಲೂಕುಗಳೆಂದು ಗುರುತಿಸಿ, ಬೆಳೆ ಸಮೀಕ್ಷೆ ದೃಢೀಕರಣ (GT) ಕೈಗೊಂಡು 7 ತಾಲ್ಲೂಕುಗಳನ್ನು ದಿನಾಂಕ:04-11-2023ರಂದು ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಿ, ಮೆಮೊರಾಂಡಮ್‌ರಲ್ಲಿ ಈಗಾಗಲೇ ಕೋರಲಾದ ರೂ.17,901.73 ಕೋಟಿಗಳ ಮೊತ್ತದ ಜೊತೆಗೆ ರೂ.269.71 ಕೋಟಿ ಸೇರಿ ಒಟ್ಟು ರೂ.18,171.44 ಕೋಟಿಗಳ ಆರ್ಥಿಕ ನೆರವು ಕೋರಿ ದಿನಾಂಕ:16-11-2023ರಂದು NDRF ರಡಿ ಆರ್ಥೀಕ ನೆರವು ಕೋರಿ ಕೇಂದ್ರ ಸರ್ಕಾರಕ್ಕೆ ಹೆಚ್ಚುವರಿ ಮೆಮೊರಾಂಡಮ್ ಸಲ್ಲಿಸಲಾಯಿತು.

9) ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯದ ಬರ ನಿರ್ವಹಣೆ ಕೈಪಿಡಿ 2020 ರನ್ವಯ 1 ನೇ ಹಂತದ Mandatory Indicators ಹಾಗೂ 2 ನೇ ಹಂತದ Impact Indicators ರಲ್ಲಿ ಅರ್ಹತೆ ಪಡೆದ ನಂತರ 3 ನೇ ಹಂತದಲ್ಲಿ ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಎಲ್ಲಾ ಜಿಲ್ಲೆಗಳ 2980 ಗ್ರಾಮಗಳಲ್ಲಿ 22,165 ಪ್ಲಾಟ್ ಗಳಲ್ಲಿ ಬೆಳೆ ಪರಿಸ್ಥಿತಿ ದೃಢೀಕರಣ (Ground Truthing) ನಡೆಸಲಾಗಿದೆ. ಇದರ ಅನುಸಾರ ಬರ-ವರ್ಗೀಕರಣ ನಿರ್ಧರಿಸಲಾಗಿದೆ.

10) ಕೇಂದ್ರ ಸರ್ಕಾರವು ರಾಜ್ಯದಿಂದ ಸಲ್ಲಿಸಲಾಗಿದ್ದ Memorandum ಪರಿಗಣಿಸಿ ಕೇಂದ್ರದ ಕೃಷಿ ಮಂತ್ರಾಲಯ, Inter Ministerial Central Team (IMCT) ರಚಿಸಿತು. ಕೃಷಿ ಮಂತ್ರಾಲಯದಿಂದ ಜಂಟಿ ಕಾರ್ಯದರ್ಶಿ ರವರ ನೇತೃತ್ವದಲ್ಲಿ 10 ಜನರ IMCT ತಂಡ ರಾಜ್ಯದ 13 ಜಿಲ್ಲೆಗಳಿಗೆ ದಿನಾಂಕ: 4 ರಿಂದ 09 ನೇ ಅಕ್ಟೋಬರ್ ವರೆಗೆ ಭೇಟಿ ನೀಡಿ ಬರ ಪರಿಸ್ಥಿತಿ ಪರಿವೀಕ್ಷಣೆ ನಡೆಸಿತು. ಕೇಂದ್ರ ತಂಡಕ್ಕೆ ಮಾನ್ಯ ಮುಖ್ಯ ಮಂತ್ರಿಗಳು ಹಾಗೂ ಸಚಿವ ಸಂಪುಟ ಉಪಸಮಿತಿ ಅಧ್ಯಕ್ಷರು ಮತ್ತು ಸದಸ್ಯರು ರಾಜ್ಯದಲ್ಲಿನ ಬರ ಪರಿಸ್ಥಿತಿ ಕುರಿತು ಮನವರಿಕೆ ಮಾಡಿ NDRF ಅಡಿಯಲ್ಲಿ ಕೋರಿರುವ ಆರ್ಥಿಕ ನೆರವನ್ನು ಶೀಘ್ರದಲ್ಲಿ ಬಿಡುಗಡೆ ಮಾಡುವಂತೆ ಸೂಚಿಸಿದರು.

11) ಕೇಂದ್ರ ಸರ್ಕಾರದ ಕೃಷಿ ಮಂತ್ರಾಲಯ ಬರ ನಿರ್ವಹಣೆ ಕೈಪಿಡಿ 2020ರನ್ವಯ ವಿವಿಧ ಅವಧಿಯ ಹವಮಾನ ಪರಿಸ್ಥಿತಿ ಅನುಗುಣವಾಗಿ ಒಟ್ಟು 223 ತಾಲ್ಲೂಕುಗಳನ್ನು (196 ತೀವ್ರ ಬರ & 27 ಸಾಧರಣ ಬರ) ಬರ ಪೀಡಿತ ತಾಲ್ಲೂಕುಗಳೆಂದು ಘೋಷಿಸಲಾಗಿದೆ.

12) ಮುಂದಿನ ದಿನಗಳಲ್ಲಿ ಕುಡಿಯುವ ನೀರು ಪೂರೈಕೆ, ಗೋಶಾಲೆ & ಮೇವಿನ ಬ್ಯಾಂಕ್ ನಿರ್ವಹಣೆ ಇತರೆ ತುರ್ತು ಬರ ನಿರ್ವಹಣೆ ಕಾರ್ಯಗಳನ್ನು ಕೈಗೆತ್ತಿಕೊಳ್ಳಲು 31 ಜಿಲ್ಲೆಗಳಿಗೆ ರೂ.324 ಕೋಟಿ ಗಳನ್ನು ದಿನಾಂಕ:31-10-2023ರಂದು ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಲಾಗಿದೆ ಇದನ್ನು ಒಳಗೊಂಡಂತೆ ದಿನಾಂಕ:29-01-2024 ರನ್ವಯ ಜಿಲ್ಲಾಧಿಕಾರಿಗಳ ಪಿಡಿ ಖಾತೆಯಲ್ಲಿ ಒಟ್ಟು ರೂ.735.87ಕೋಟಿ ಹಾಗೂ ತಹಶೀಲ್ದಾರ್ ಪಿಡಿ ಖಾತೆಯಲ್ಲಿ ರೂ.131.95 ಕೋಟಿ ಒಟ್ಟು ರೂ.867.82 ಕೋಟಿ ಅನುದಾನ ಲಭ್ಯವಿದ್ದು ತುರ್ತು ಬರ ನಿರ್ವಹಣೆಗೆ ಅನುದಾನದ ಕೊರತೆ ಇರುವುದಿಲ್ಲ.

13) ಮುಂದಿನ ದಿನಗಳಲ್ಲಿ ಮೇವಿನ ಕೊರತೆ ಉಂಟಾಗದಂತೆ ಇಲಾಖೆಯ ಯೋಜನೆಗಳ ಮೂಲಕ ರೈತರಿಗೆ ಮೇವಿನ ಬೀಜ ವಿತರಿಸಿ, ಮೇವು ಬೆಳೆಸಲು, ಪ್ರೋತ್ಸಾಹಿಸಲು ಕ್ರಮ ಕೈಗೊಳ್ಳಲಾಗಿದೆ. SDRF ಅಡಿಯಲ್ಲಿ ಮೇವಿನ ಕಿರುಪೊಟ್ಟಣಗಳನ್ನು ನಿಯಮಾನುಸಾರ ಖರೀದಿಸಲು ರೂ.20.00 ಕೋಟಿ ಗಳನ್ನು ಪಶು ಸಂಗೋಪನೆ ಇಲಾಖೆಗೆ ಬಿಡುಗಡೆಗೊಳಿಸಲಾಗಿದೆ. ಈ ಸಂಬಂಧ ಪಶು ಸಂಗೋಪನೆ ಇಲಾಖಾ ವತಿಯಿಂದ 7,43,979 ಮೇವಿನ ಬೀಜದ ಕಿರು ಪೊಟ್ಟಣಗಳನ್ನು ಜಿಲ್ಲೆಗಳಿಗೆ ರವಾನಿಸಿದ್ದು, 3,90,925 ರೈತರಿಗೆ 6,72,263 ಮಿನಿ ಕಿಟ್‌ಗಳನ್ನು ಉಚಿತವಾಗಿ ಪಶುಸಂಗೋಪನೆ ಇಲಾಖೆಯ ಮೂಲಕ ವಿತರಿಸಲಾಗಿದೆ.

14) ತಾಲ್ಲೂಕು ಮಟ್ಟದಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳ ಮೇವು ನಿರ್ವಹಣೆಗೆ ಹಾಗೂ ಬರ ಪರಿಹಾರ ಕ್ರಮಗಳ ಮೇಲ್ವಿಚಾರಣೆಗಾಗಿ ಶಾಸಕರ ನೇತೃತ್ವದಲ್ಲಿ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ರಚಿಸಲಾಗಿದೆ. ಸದರಿ ಕಾರ್ಯ ಪಡೆಯು ಕಾಲ-ಕಾಲಕ್ಕೆ ಸಭೆಗಳನ್ನು ನಡೆಸಿ ಬರ ನಿರ್ವಹಣೆಯ ಪರಿಸ್ಥಿತಿಯನ್ನು ಪರಿಶೀಲಿಸಲು ಸೂಚನೆ ನೀಡಲಾಗಿದೆ. ದಿನಾಂಕ:09-02-2024ರಂತೆ 431 ಸಭೆಗಳನ್ನು ನಡೆಸಲಾಗಿದೆ.

15) ಬರ ಪೀಡಿತ ಪ್ರದೇಶಗಳಲ್ಲಿ ಕುಡಿಯುವ ನೀರು ಸರಬರಾಜು ಹಾಗೂ ಮೇವು ಸರಬರಾಜು ಪ್ರಕ್ರಿಯೆಗೆ KTPP ಕಾಯ್ದೆಯಡಿ ಟೆಂಡರ್ ಪ್ರಕ್ರಿಯೆಗಳನ್ನು ಕೈಗೊಳ್ಳಲು ಕ್ರಮ ವಹಿಸಲಾಗಿದೆ. ಇಲ್ಲಿಯವರೆಗೆ 26 ಜಿಲ್ಲೆಗಳಲ್ಲಿ ಕುಡಿಯುವ ನೀರಿನ ಟ್ಯಾಂಕರ್ ಪಡೆಯಲು ಹಾಗೂ 23 ಜಿಲ್ಲೆಗಳಲ್ಲಿ ಮೇವು ಸರಬರಾಜು ಪಡೆಯಲು ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಲಾಗಿದೆ.

16) ಟ್ಯಾಂಕರ್ ಮೂಲಕ ಹಾಗೂ ಖಾಸಗಿ ಬೋರ್‌ವೆಲ್‌ಗಳನ್ನು ಬಾಡಿಗೆ ಆಧಾರದ ಮೇಲೆ ಪಡೆದು ತುರ್ತು ಕುಡಿಯುವ ನೀರು ಪೂರೈಕೆಗೆ ಹಾಗೂ ಜಾನುವಾರು ಸಂರಕ್ಷಣೆಗಾಗಿ ಗೋಶಾಲೆ ಹಾಗೂ ಮೇವಿನ ಬ್ಯಾಂಕ್‌ಗಳನ್ನು ಅಗತ್ಯತೆಯ ಅನುಗುಣವಾಗಿ ತೆರೆಯಲು ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ ಇದಕ್ಕೆ ಸಂಬಂಧಿಸಿದಂತೆ 15 ದಿನದೊಳಗೆ ಬಿಲ್ಲು ಪಾವತಿ ಮಾಡಲು ಕ್ರಮ ವಹಿಸಲು ಸೂಚಿಸಲಾಗಿದೆ. ದಿನಾಂಕ:10-2-2024ರನ್ವಯ 46 ಗ್ರಾಮಗಳಿಗೆ 60 ಟ್ಯಾಂಕರ್ ಮೂಲಕ ಹಾಗೂ 156 ಗ್ರಾಮಗಳಲ್ಲಿ 183 ಖಾಸಗಿ ಬೋರ್ ವೆಲ್ ಗಳನ್ನು ಬಾಡಿಗೆ ಆಧಾರದ ಮೇರೆಗೆ ಪಡೆದು ಹಾಗೂ 4 ನಗರ ಸ್ಥಳೀಯ ಸಂಸ್ಥೆಗಳಲ್ಲಿನ 46 ವಾರ್ಡ್‌ಗಳಲ್ಲಿ 12 ಟ್ಯಾಂಕರ್‌ಗಳ ಮೂಲಕ ತುರ್ತು ಕುಡಿಯುವ ನೀರು ಪೂರೈಸಲಾಗುತ್ತಿದೆ. ಮುಂದಿನ ಬೇಸಿಗೆ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸಬಹುದಾದ ಒಟ್ಟು 7082 ಗ್ರಾಮಗಳನ್ನು ಹಾಗೂ 1193 ವಾರ್ಡ್‌ಗಳನ್ನು ಗುರುತಿಸಲಾಗಿದೆ. ಮುಂಜಾಗ್ರತಾ ಕ್ರಮವಾಗಿ ಒಟ್ಟು 6416 ಖಾಸಗಿ ಬೋರ್‌ವೆಲ್‌ಗಳನ್ನು ಗುರುತಿಸಿದ್ದು, ಅವುಗಳಲ್ಲಿ 2654 ಬೋರ್‌ವೆಲ್‌ಗಳ ಮಾಲೀಕರೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.

17) ಮುಂದಿನ ದಿನಗಳಲ್ಲಿ ಜಾನುವಾರುಗಳಿಗೆ ಅಗತ್ಯವಿರುವ ಮೇವಿನ ಕೊರತೆ ನೀಗಿಸಲು ರಾಜ್ಯದಲ್ಲಿ ರೈತರ ಬಳಿ ಇರುವ ಮೇವು ಇತರ ರಾಜ್ಯಗಳಿಗೆ ಮಾರಾಟವಾಗದಂತೆ / ಸಾಗಣಿಕೆ ಮಾಡದಂತೆ ನಿರ್ಬಂಧಿಸಲು ಆದೇಶ ಹೊರಡಿಸಲಾಗಿದೆ.

18) ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರಾದ ಜಿಲ್ಲಾಧಿಕಾರಿಗಳು ಕಾಲ-ಕಾಲಕ್ಕೆ ಬರ ನಿರ್ವಹಣೆಯ ಕುರಿತು ಸಭೆಗಳನ್ನು ನಡೆಸಿ ವಾಸ್ತವಿಕ ಪರಿಸ್ಥಿತಿಯ ಪರಿಶೀಲನೆಗಾಗಿ ಸಭೆ ನಡೆಸಲು ಸೂಚಿಸಲಾಗಿದೆ. ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಜೂನ್ 2023ರಿಂದ ದಿನಾಂಕ:09-02-2024ರವರೆಗೆ 236 ಸಭೆಗಳನ್ನು ನಡೆಸಲಾಗಿದೆ.

19) ರಾಜ್ಯದಲ್ಲಿನ ಬರ ಪರಿಸ್ಥಿತಿ ಉಪ ಶಮನಗೊಳಿಸಲು ರಾಜ್ಯ ವಿಪತ್ತು ಉಪಶಮನ ನಿಧಿ (SDMF) ರಡಿ ಕೃಷಿ ಭಾಗ್ಯ ಯೋಜನೆಯ ಅನುಷ್ಠಾನಕ್ಕಾಗಿ ಕೃಷಿ ಇಲಾಖೆಗೆ ರೂ.100.00 ಕೋಟಿಗಳನ್ನು ಮಂಜೂರು ಮಾಡಲು ಕ್ರಮ ವಹಿಸಲಾಗುತ್ತಿದೆ.

20) ರಾಜ್ಯದಲ್ಲಿ ಬರ-ಪರಿಸ್ಥಿತಿ ಇರುವುದರಿಂದ RBI ನಿರ್ದೇಶನದಂತೆ ರೈತರ ಬೆಳೆ ಸಾಲದ ಮರುಪಾವತಿ ಅವಧಿಯನ್ನು ಅಲ್ಪಾವಧಿಯಿಂದ ಮಧ್ಯಾವಾವಧಿ / ದೀರ್ಘಾವದಿಗೆ Re-structure ಮಾಡಲು SLBC ಗೆ ಸೂಚಿಸಲಾಗಿದೆ.

21) ಬರ-ಪರಿಸ್ಥಿತಿಯ ಹಿನ್ನಲೆಯಲ್ಲಿ ಕೇಂದ್ರ ಸರ್ಕಾರದಿಂದ NDRF ಅನುದಾನವನ್ನು ನಿರೀಕ್ಷಿಸಿ SDRF/NDRF ಮಾರ್ಗಸೂಚಿಗಳ ಪ್ರಕಾರ ಬೆಳೆ ಹಾನಿ ಪರಿಹಾರದ ಮೊದಲನೇ ಕಂತಾಗಿ / ಬೆಳೆ ಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ರೂ.2,000/- ರವರೆಗೆ ರೈತರಿಗೆ ಪಾವತಿಲು ತೀರ್ಮಾನಿಸಲಾಗಿದೆ. ದಿನಾಂಕ:12-02-2024ರ ವರೆಗೆ 33.09 ಲಕ್ಷ ರೈತರ ಆಧಾರ್ ಜೋಡಣೆಯಾದ ಬ್ಯಾಂಕ್ ಖಾತೆಗಳಿಗೆ ರೂ.628.03 ಕೋಟಿ ನೇರವಾಗಿ ಡಿಬಿಟಿ ಮೂಲಕ ಜಮೆ ಮಾಡಲಾಗಿದೆ.

22) ತುರ್ತು ಕುಡಿಯುವ ನೀರು ಪೂರೈಕೆ ಹಾಗೂ ಗೋಶಾಲೆ ಮತ್ತು ಮೇವಿನ ಬ್ಯಾಂಕ್ ತೆರೆಯಲು ಸ್ಥಳಿಯ ಮಟ್ಟದ ಪರಿಸ್ಥಿತಯನುಗುಣವಾಗಿ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ದಿನಾಂಕ:09-02-2024ರಂತೆ ಚಿತ್ರದುರ್ಗ ಜಿಲ್ಲೆಯಲ್ಲಿ-3 (ಚಳ್ಳಕೆರೆ-2, ಚಿತ್ರದುರ್ಗ-1) ಗೋಶಾಲೆಗಳನ್ನು ತೆರೆಯಲಾಗಿದೆ.

*****

ಎಸ್.ಆರ್. ಶಿವಶಂಕರ್
ಸರ್ಕಾರದ ಉಪ ಕಾರ್ಯದರ್ಶಿ
ಕಂದಾಯ ಇಲಾಖೆ (ವಿ.ನಿ & ನೋ.ಮು)